## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1136 |
| ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2009-10ನೇ ಸಾಲಿನಲ್ಲಿ ಪ್ರಾರಂಭಿಸಲಾದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 6-12ನೇ ತರಗತಿಗೆ ಮಕ್ಕಳು ಪ್ರವೇಶಾತಿ ಪಡೆಯಲು ಆದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 2009-10 ನೇ ಸಾಲಿನಿಂದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು 6 ರಿಂದ 12ನೇ ತರಗತಿಯವರೆಗೆ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ. ಸದರಿ ವಸತಿ ಶಾಲೆಗಳಲ್ಲಿ 6-10ನೇ ತರಗತಿಯವರೆಗೆ ಶಾಲಾ ವಿಭಾಗಕ್ಕೆ ಮಾತ್ರ ಹುದ್ದೆಗಳು ಮಂಜೂರಾಗಿರುವುದರಿಂದ 6 ರಿಂದ 10ನೇ ತರಗತಿಯವರೆಗೆ ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದೆ.<br><br>ಸದರಿ ವಸತಿ ಶಾಲೆಗಳಲ್ಲಿ 11 ಮತ್ತು 12ನೇ ತರಗತಿಯ ಕಾಲೇಜು ವಿಭಾಗಕ್ಕೆ ಹುದ್ದೆಗಳು ಮಂಜೂರು ಆಗದಿರುವುದರಿಂದ ತರಗತಿಗಳನ್ನು ಪ್ರಾರಂಭಿಸಿರುವುದಿಲ್ಲ. ಹುದ್ದೆಗಳ ಮಂಜೂರಾತಿ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 11 ಮತ್ತು 12ನೇ ತರಗತಿಗಳನ್ನು ಪ್ರಾರಂಭಿಸಲು ಮತ್ತು ಶಾಲೆಗಳಲ್ಲಿ ಪ್ರವೇಶಾತಿ ನೀಡಲು ಕ್ರಮವಹಿಸಲಾಗುವುದು. |
| ಆ) | ಸದರಿ ವಸತಿ ಶಾಲೆಗಳಲ್ಲಿ 6-10ನೇ ತರಗತಿವರೆಗೆ ಮಾತ್ರ ಪ್ರವೇಶಾತಿ ಪಡೆಯುತ್ತಿದ್ದು, ಇದರಿಂದ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ 11 ಮತ್ತು 12ನೇ ತರಗತಿಗಳನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | |

ಸಕಇ-ಎಂಡಿಎಸ್/244/2023

(ಡಾ\|\|ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು